**<u>ದಿಃ12.03.2026 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ.ಎಂ.ವೈ.ಬಿ ವಕೀಲರಿಂದ ಃ</u>**

ನಾನು ಈ ದಾವೆಯಲ್ಲಿ ವಾದಿಗಳ ಪರ ಸಾಕ್ಷಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು, ಅದರಲ್ಲಿ ಪ್ರಸ್ತಾಪಿಸಿರುವ ವಿಚಾರಗಳನ್ನು ನಾನೇ ಮಾಹಿತಿ ಕೊಟ್ಟು ಬರೆಸಿರುತ್ತೇನೆ ಮತ್ತು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದ ಒಕ್ಕಣೆಯನ್ನು ಓದಿಸಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಸಂಗತಿಗಳು ಸತ್ಯದಿಂದ ಕೂಡಿದೆ ಎಂದು ಮತ್ತು ಅದರಲ್ಲಿ ಇರುವ ಸಹಿ ನನ್ನದಾಗಿರುತ್ತದೆ.

1. ಸಾಕ್ಷಿಗೆ ನಿಪಿ.1 ನ್ನು ತೋರಿಸಲಾಗಿ ಅದರ ಮೇಲೆ ಇರುವ ತನ್ನ ಸಹಿ, ವಾದಿಗಳ ಸಹಿ, 1ನೇ ಪ್ರತಿವಾದಿ ಸಹಿಗಳು ಮತ್ತು ಇತರ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದಾರೆ. ನಿಪಿ.1(ಎ) ಯಿಂದ (Z{1 to 3}) ಎಂದು ಗುರುತಿಸಲಾಗಿದೆ.

**<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ .ಸಎಸ್.ಪಿ.ವಕೀಲರಿಂದ ಃ</u>**

ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರುವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-

(ಸಿ. ವೀರಭದ್ರಯ್ಯ)
ಹಿರಿಯ ಸಿವಿಲ್ ನ್ಯಾಯಾಧೀಶರು,
ಕೊಡಗು, ಮಡಿಕೇರಿ.